# ಕರ್ನಾಟಕ ವಿಧಾನ ಪರಿಷತ್ತು

1) ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 310(432)
2) ಸದಸ್ಯರ ಹೆಸರು : ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನ ಸಭೆಯಿಂದ ಚುನಾಯಿತರಾದವರು)
3) ಉತ್ತರಿಸುವ ದಿನಾಂಕ : 12.12.2018.
4) ಉತ್ತರಿಸುವವರು : ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಸಚಿವರು

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | 2016-17, 2017-18ನೇ ಸಾಲಿನವರೆಗೆ ಬೀದರ್ ಜಿಲ್ಲೆಯ ಅಭಿವೃದ್ಧಿಗಾಗಿ ವಿವಿಧ ಯೋಜನೆಗಳಿಗಾಗಿ ಹಾಗೂ ಇನ್ನಿತರ ವಿವಿಧ ಲೆಕ್ಕಶೀರ್ಷಿಕೆಗಳಡಿಯಲ್ಲಿ ಬಿಡುಗಡೆ ಮಾಡಿದ ಅನುದಾನವೆಷ್ಟು; ಆ ಪೈಕಿ ಕೇಂದ್ರ ಮತ್ತು ರಾಜ್ಯ ಸರ್ಕಾರದ ಪಾಲೆಷ್ಟು; (ಯೋಜನೆಗಳವಾರು ಅಂಕಿ-ಅಂಶಗಳೊಂದಿಗೆ ವರ್ಷವಾರು/ ತಾಲ್ಲೂಕುವಾರು ಪೂರ್ಣ ಮಾಹಿತಿ ನೀಡುವುದು) | ಬೀದರ್ ಜಿಲ್ಲೆಯ ಅರಣ್ಯ ಅಭಿವೃದ್ಧಿಗಾಗಿ ಬೀದರ ಪ್ರಾದೇಶಿಕ ಅರಣ್ಯ ವಿಭಾಗ ಹಾಗೂ ಸಾಮಾಜಿಕ ಅರಣ್ಯ ವಿಭಾಗಕ್ಕೆ 2016-17 ಮತ್ತು 2017-18ನೇ ಸಾಲಿನಲ್ಲಿ ವಿವಿಧ ಯೋಜನೆಗಳಿಗಾಗಿ ಹಾಗೂ ವಿವಿಧ ಲೆಕ್ಕ ಶೀರ್ಷಿಕೆಗಳಡಿಯಲ್ಲಿ ಬಿಡುಗಡೆ ಮಾಡಿದ ಅನುದಾನ ಹಾಗೂ ಕೇಂದ್ರ ಮತ್ತು ರಾಜ್ಯ ಸರ್ಕಾರದ ಪಾಲಿನ ವಿವರಗಳನ್ನು ಅನುಬಂಧ-1ರಲ್ಲಿ ನೀಡಲಾಗಿದೆ. |
| (ಆ) | ಹಾಗಿದ್ದಲ್ಲಿ, ಕಳೆದ 03 ವರ್ಷಗಳಲ್ಲಿ ನೆಡುತೋಪು (ಪ್ಲಾಂಟೇಷನ್) ಯೋಜನೆ ಕಾಮಗಾರಿಯನ್ನು ಯಾವ ಯಾವ ವ್ಯಾಪ್ತಿಯಲ್ಲಿ ಎಷ್ಟು ಹೆಕ್ಟರ್‌ನಲ್ಲಿ ಕೈಗೊಳ್ಳಲಾಗಿದೆ; | ಬೀದರ ಪ್ರಾದೇಶಿಕ/ಸಾಮಾಜಿಕ ಅರಣ್ಯ ವಿಭಾಗದಲ್ಲಿ ಕಳೆದ ಮೂರು ವರ್ಷಗಳಲ್ಲಿ ನೆಡುತೋಪು ಯೋಜನೆ ಕೈಗೊಂಡ ಪ್ರದೇಶ, ವಿಸ್ತೀರ್ಣ ಮತ್ತು ಖರ್ಚಿನ ವಿವರಗಳನ್ನು ಹಾಗೂ ಅರಣ್ಯ ಗುತ್ತಿಗೆದಾರರ ಮೂಲಕ ತುಂಡು ಕಾಮಗಾರಿ ಒಪ್ಪಂದ ಮಾಡಿಕೊಂಡು ನಿರ್ವಹಿಸಲಾಗಿರುವ ಕಾಮಗಾರಿಗಳು, ಗುತ್ತಿಗೆದಾರರ ಹೆಸರುಗಳ ವಿವರಗಳನ್ನು ಅನುಬಂಧ-2ರಲ್ಲಿ ನೀಡಲಾಗಿದೆ. |
| (ಇ) | ಇದಕ್ಕೆ ತಗುಲಿದ ಖರ್ಚು ಎಷ್ಟು; ಕೂಲಿ ಕಾರ್ಮಿಕರಿಗೆ ನೀಡಿದ ಹಣ ಎಷ್ಟು? (ವರ್ಷವಾರು/ಯೋಜನೆವಾರು/ತಾಲ್ಲೂಕುವಾರು ಕೂಲಿ ಕಾರ್ಮಿಕರ ಪಟ್ಟಿ ಮತ್ತು ಹೆಸರು, ಗುತ್ತಿಗೆ ನೀಡಿದಲ್ಲಿ ಗುತ್ತಿಗೆದಾರರ ಹೆಸರುಗಳೊಂದಿಗೆ ಅಂಕಿ-ಅಂಶಗಳೊಂದಿಗೆ ಮಾಹಿತಿ ನೀಡುವುದು) | |

ಸಂಖ್ಯೆ: ಅಪಜೀ 55 ಎಫ್‌ಟಿಎಸ್ 2018

(ಆರ್. ಶಂಕರ್)
ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಸಚಿವರು